All India Radio: Bangalore
National Bulletin In Kannada
18.03.2026 7.35 am
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<>><><*><><<>

ಮುಖ್ಯಾಂಶಗಳು

೧. ೨೦೨೬ ರ ವಿನಿಯೋಗ ಮಸೂದೆಗೆ ಸಂಸತ್ ಅಂಗೀಕಾರ; ಪ್ರಸಕ್ತ ಸಾಲಿನ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯದ ಅನುದಾನದ ಬೇಡಿಕೆಗಳ ಕುರಿತು ಲೋಕಸಭೆಯಲ್ಲಿಂದು ಚರ್ಚೆ

೨. ಯುಎಇ ಅಧ್ಯಕ್ಷರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಮಾತುಕತೆ; ಪಶ್ಚಿಮ ಏಷ್ಯಾದ ಪರಿಸ್ಥಿತಿ ಕುರಿತು ಚರ್ಚೆ

೩. ಇಸ್ರೇಲ್ ದಾಳಿಯಲ್ಲಿ ಇರಾನ್‌ನ ಇಬ್ಬರು ಉನ್ನತ ಭದ್ರತಾ ಅಧಿಕಾರಿಗಳು ಸಾವು

೪. ಇರಾನ್ ವಿರುದ್ಧದ ಅಮೆರಿಕ ಮಿಲಿಟರಿ ಕಾರ್ಯಾಚರಣೆಯಲ್ಲಿ ಭಾಗಿಯಾಗಲು ನಿರಾಕರಿಸಿದ ನ್ಯಾಟೊ ರಾಷ್ಟ್ರಗಳು

<>><><*><><<>

೨೦೨೬-೨೭ನೇ ಸಾಲಿನ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯದ ಅನುದಾನದ ಬೇಡಿಕೆಗಳ ಕುರಿತು ಲೋಕಸಭೆಯಲ್ಲಿ ಇಂದು ಚರ್ಚೆ ನಡೆಯಲಿದೆ. ಕೇಂದ್ರ ಗೃಹ ಸಚಿವಾಲಯ, ವಿದೇಶಾಂಗ ಸಚಿವಾಲಯ ಮತ್ತು ಇಂಧನ ಸಚಿವಾಲಯದ ಅನುದಾನದ ಬೇಡಿಕೆಗಳ ಕುರಿತು ಸಹ ಸದನದಲ್ಲಿ ಚರ್ಚೆಗಳು ನಡೆಯಲಿವೆ. ಲೋಕಸಭೆಯಲ್ಲಿ ನಿನ್ನೆ ಸಂಜೆ ರೈಲ್ವೆ ಸಚಿವಾಲಯದ ಅನುದಾನದ ಬೇಡಿಕೆಯ ಕುರಿತು ನಡೆದ ಚರ್ಚೆಗೆ ಉತ್ತರಿಸಿದ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ಕಳೆದ ೧೦ ವರ್ಷಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ರೈಲ್ವೆಯ ಆರ್ಥಿಕತೆ ಗಮನಾರ್ಹವಾಗಿ ಸುಧಾರಿಸಿದೆ ಎಂದು ಹೇಳಿದರು. ಏತನ್ಮಧ್ಯೆ, ಸಂಸತ್ತು ೨೦೨೬ ರ ವಿನಿಯೋಗ ಮಸೂದೆಯನ್ನು ಅಂಗೀಕರಿಸಿತು, ರಾಜ್ಯಸಭೆಯು ನಿನ್ನೆ ಚರ್ಚೆಯ ನಂತರ ಅದನ್ನು ಕೆಳಮನೆಗೆ ಹಿಂದಿರುಗಿಸಿತು. ಲೋಕಸಭೆಯು ಈಗಾಗಲೇ ವಿನಿಯೋಗ ಮಸೂದೆಗೆ ಅನುಮೋದನೆ ನೀಡಿದೆ.

<>><><*><><<>

ಅಸ್ಸಾಂ, ಕೇರಳ, ಪುದುಚೇರಿ, ತಮಿಳುನಾಡು ಮತ್ತು ಪಶ್ಚಿಮ ಬಂಗಾಳದ ವಿಧಾನಸಭಾ ಚುನಾವಣೆಗಳು ಮತ್ತು ೬ ರಾಜ್ಯಗಳ ಉಪಚುನಾವಣೆಗಳಿಗಾಗಿ ಚುನಾವಣಾ ಆಯೋಗ, ಒಂದು ಸಾವಿರದ ಒಂದುನೂರು ೧೧ ಕೇಂದ್ರ ವೀಕ್ಷಕರನ್ನು ನಿಯೋಜಿಸಿದೆ. ಅವರಲ್ಲಿ ೫೫೭ ಸಾಮಾನ್ಯ ವೀಕ್ಷಕರು, ೧೮೮ ಪೊಲೀಸ್ ವೀಕ್ಷಕರು ಮತ್ತು ೩೬೬ ವೆಚ್ಚ ವೀಕ್ಷಕರು ಎಂದು ಆಯೋಗ ತಿಳಿಸಿದೆ.

<>><><*><><<>

ಪ್ರಧಾನಿ ನರೇಂದ್ರ ಮೋದಿ ಅವರು ಯುನೈಟೆಡ್ ಅರಬ್ ಎಮಿರೇಟ್ಸ್- ಯುಎಇ ಅಧ್ಯಕ್ಷ ಶೇಖ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಅವರೊಂದಿಗೆ ದೂರವಾಣಿ ಮೂಲಕ ಮಾತುಕತೆ ನಡೆಸಿದರು. ಮಾತುಕತೆ ವೇಳೆ ಉಭಯ ನಾಯಕರು ಪಶ್ಚಿಮ ಏಷ್ಯಾದ ಪ್ರಸ್ತುತ ಪರಿಸ್ಥಿತಿಯ ಬಗ್ಗೆ ಚರ್ಚಿಸಿದರು.

ಯುಎಇ ಮೇಲೆ ನಡೆದ ದಾಳಿಗಳಲ್ಲಿ ಅಮಾಯಕರ ಜೀವಗಳು ಬಲಿಯಾಗಿವೆ ಮತ್ತು ನಾಗರಿಕ ಮೂಲಸೌಕರ್ಯಕ್ಕೆ ಹಾನಿಯನ್ನುಂಟುಮಾಡಿವೆ. ಈ ಬಗ್ಗೆ ಭಾರತದ ಬಲವಾದ ಖಂಡನೆಯನ್ನು ಪ್ರಧಾನಿ ಪುನರುಚ್ಚರಿಸಿದರು. ಹಾರ್ಮುಜ್ ಜಲಸಂಧಿಯ ಮೂಲಕ ಸುರಕ್ಷಿತ ಮತ್ತು ಮುಕ್ತ ಸಂಚಾರವನ್ನು ಖಚಿತಪಡಿಸಿಕೊಳ್ಳುವ ಮಹತ್ವವನ್ನು ಎರಡೂ ಕಡೆಯವರು ಒಪ್ಪಿಕೊಂಡಿದ್ದಾರೆ. ಸಂಭಾಷಣೆಯ ಸಮಯದಲ್ಲಿ, ಈ ಪ್ರದೇಶದಲ್ಲಿ ಶಾಂತಿ, ಭದ್ರತೆ ಮತ್ತು ಸ್ಥಿರತೆಯ ಆರಂಭಿಕ ಪುನಃಸ್ಥಾಪನೆಗಾಗಿ ಒಟ್ಟಾಗಿ ಕೆಲಸ ಮಾಡುವುದನ್ನು ಮುಂದುವರಿಸಲಾಗುವುದು ಎಂದು ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

<>><><*><><<>

ಇಸ್ರೇಲ್ ದಾಳಿಯಲ್ಲಿ ಇರಾನ್‌ನ ರಾಷ್ಟ್ರೀಯ ಭದ್ರತಾ ಮುಖ್ಯಸ್ಥ ಅಲಿ ಲಾರಿಜಾನಿ ಮತ್ತು ಬಸಿಜ್ ಪಡೆಯ ಮುಖ್ಯಸ್ಥ ಘೋಲಮ್ ರೆಜಾ ಸೊಲೈಮಾನಿ ಅವರ ಹತ್ಯೆಯನ್ನು ಇರಾನ್ ದೃಢಪಡಿಸಿದೆ. ಲಾರಿಜಾನಿ ಅವರು ದಿವಂಗತ ಅಯತೊಲ್ಲಾ ಅಲಿ ಖಮೇನಿ ಮತ್ತು ಅವರ ಮಗ ಮೊಜ್ತಬಾ ಅವರ ಆಪ್ತರಾಗಿದ್ದರು. ಇಸ್ರೇಲ್ ದಾಳಿಯಲ್ಲಿ ಲಾರಿಜಾನಿ ಸೇರಿದಂತೆ ಇಬ್ಬರು ಉನ್ನತ ಇರಾನಿನ ಭದ್ರತಾ ಅಧಿಕಾರಿಗಳನ್ನು ಹತ್ಯೆ ಮಾಡಿರುವುದಾಗಿ ಇಸ್ರೇಲ್ ಹೇಳಿದ ಕೆಲವೇ ಗಂಟೆಗಳ ನಂತರ ಈ ದೃಢೀಕರಣ ಬಂದಿದೆ. ಟೆಹ್ರಾನ್‌ನ ಪೂರ್ವಕ್ಕೆ ಪಾರ್ಡಿಸ್ ಜಿಲ್ಲೆಯಲ್ಲಿ ತನ್ನ ಮಗಳ ಮನೆಯಲ್ಲಿದ್ದಾಗ ಲಾರಿಜಾನಿ ಅವರನ್ನು ಅಮೆರಿಕ ಮತ್ತು ಇಸ್ರೇಲ್ ಯುದ್ಧ ವಿಮಾನಗಳು ಗುರಿಯಾಗಿಸಿಕೊಂಡಿವೆ ಎಂದು ಇರಾನ್‌ನ ಸುದ್ದಿ ಸಂಸ್ಥೆ ತಿಳಿಸಿದೆ.

<>><><*><><<>

ಇರಾನ್ ವಿರುದ್ಧದ ಅಮೆರಿಕದ ಮಿಲಿಟರಿ ಕಾರ್ಯಾಚರಣೆಯಲ್ಲಿ ಭಾಗಿಯಾಗಲು ಹೆಚ್ಚಿನ ನ್ಯಾಟೊ ಮಿತ್ರರಾಷ್ಟ್ರಗಳು ನಿರಾಕರಿಸಿವೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ, ಇದೇ ವೇಳೆ ನ್ಯಾಟೊ ಮೈತ್ರಿಕೂಟವನ್ನು ಟೀಕಿಸಿರುವ ಅವರು, ಅಮೆರಿಕಕ್ಕೆ ವಿದೇಶಿ ಬೆಂಬಲದ ಅಗತ್ಯವಿಲ್ಲ ಎಂದು ಪ್ರತಿಪಾದಿಸಿದ್ದಾರೆ. ಬಹುತೇಕ ಪ್ರತಿಯೊಂದು ದೇಶವು ಅಮೆರಿಕ ಮಾಡುತ್ತಿರುವ ಕೆಲಸವನ್ನು ಬಲವಾಗಿ ಒಪ್ಪಿಕೊಂಡಿದೆ. ಇರಾನ್, ಯಾವುದೇ ರೀತಿಯಲ್ಲಿ ಅಥವಾ ರೂಪದಲ್ಲಿ ಪರಮಾಣು ಶಸ್ತ್ರಾಸ್ತ್ರವನ್ನು ಹೊಂದಲು ಅನುಮತಿಸಲು ಸಾಧ್ಯವಿಲ್ಲ ಎಂದು ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

<>><><*><><<>

ಇರಾಕ್ ರಾಜಧಾನಿ ಬಾಗ್ದಾದ್ ನಗರದ ಭಾರೀ ಭದ್ರತೆಯ ಹಸಿರು ವಲಯದಲ್ಲಿ ನಿನ್ನೆ ಅಮೆರಿಕದ ರಾಯಭಾರ ಕಚೇರಿಯ ಬಳಿ ಸರಣಿ ಸ್ಫೋಟಗಳು ನಡೆದಿವೆ. ಇರಾನ್ ವಿರುದ್ಧ ವೇಗವಾಗಿ ಹೆಚ್ಚುತ್ತಿರುವ ಅಮೆರಿಕ-ಇಸ್ರೇಲ್ ಸಂಘರ್ಷ ಗಡಿಯುದ್ದಕ್ಕೂ ವಿಸ್ತರಿಸುತ್ತಲೇ ಇದೆ. ಕನಿಷ್ಠ ಮೂರು ಡ್ರೋನ್‌ಗಳು ಬಾಗ್ದಾದ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಬಳಿಯಿರುವ ಅಮೆರಿಕದ ರಾಜತಾಂತ್ರಿಕ ಸೌಲಭ್ಯವನ್ನು ಗುರಿಯಾಗಿಸಿಕೊಂಡು ಸಿ-ರಾಮ್ ವಾಯು ರಕ್ಷಣಾ ವ್ಯವಸ್ಥೆಗಳನ್ನು ಸಕ್ರಿಯಗೊಳಿಸಿವೆ ಎಂದು ಭದ್ರತಾ ಮೂಲಗಳು ತಿಳಿಸಿವೆ. ದಾಳಿಯಿಂದ ಸಾವು-ನೋವುಗಳ ಬಗ್ಗೆ ತಕ್ಷಣದ ವರದಿಗಳಿಲ್ಲ.

<>><><*><><<>

ಗಲ್ಫ್ ಪ್ರದೇಶದಲ್ಲಿ ಎಲ್ಲಾ ಭಾರತೀಯ ನಾವಿಕರು ಮತ್ತು ಹಡಗುಗಳು ಸುರಕ್ಷಿತವಾಗಿವೆ ಎಂದು ಬಂದರು, ಹಡಗು ಸಾಗಣೆ ಮತ್ತು ಜಲಮಾರ್ಗಗಳ ಸಚಿವಾಲಯದ ವಿಶೇಷ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿನ್ಹಾ ತಿಳಿಸಿದ್ದಾರೆ. ನವದೆಹಲಿಯಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಕಳೆದ ೨೪ ಗಂಟೆಗಳಲ್ಲಿ ಗಲ್ಫ್ ಪ್ರದೇಶದಿಂದ ೧೬೧ ಭಾರತೀಯ ನಾವಿಕರು ಮರಳಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ. ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ ಮಾತನಾಡಿ, ದೇಶಾದ್ಯಂತ ಪೆಟ್ರೋಲ್ ಮತ್ತು ಡೀಸೆಲ್ ಸಾಕಷ್ಟು ಪ್ರಮಾಣದಲ್ಲಿ ಲಭ್ಯವಿದೆ. ವಾಣಿಜ್ಯ ಎಲ್‌ಪಿಜಿ ಗ್ರಾಹಕರು ಪಿಎನ್‌ಜಿ ಗೆ ವರ್ಗವಾಗುವ ನಿಟ್ಟಿನಲ್ಲಿ ಪ್ರೋತ್ಸಾಹಿಸಲು ಸರ್ಕಾರ ಪ್ರಯತ್ನಗಳನ್ನು ಮಾಡುತ್ತಿದೆ ಎಂದು ಹೇಳಿದ್ದಾರೆ. ಅನಿಲ ಕೊಳವೆ ಮಾರ್ಗಕ್ಕೆ ಬಾಕಿ ಇರುವ ಅನುಮತಿಗಳಿಗೆ ಅನುಮೋದನೆ ನೀಡುವಂತೆ ಮತ್ತು ಹೊಸ ಅರ್ಜಿಗಳನ್ನು ೨೪ ಗಂಟೆಗಳ ಒಳಗೆ ಅನುಮೋದಿಸುವಂತೆ ವಿನಂತಿಸಿ

ಕೇಂದ್ರ ಸರ್ಕಾರ, ಎಲ್ಲಾ ರಾಜ್ಯ ಸರ್ಕಾರಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಪತ್ರ ಬರೆದಿದೆ ಎಂದು ಅವರು ತಿಳಿಸಿದ್ದಾರೆ.

<>><><*><><<>

ದೀರ್ಘಕಾಲೀನ ಪರಿಸರ ಸ್ಥಿರತೆ ಮತ್ತು ಸುಸ್ಥಿರ ಬೆಳವಣಿಗೆಯನ್ನು ಖಚಿತಪಡಿಸಿಕೊಳ್ಳಲು ಬಲವಾದ ಹಸಿರು ಆರ್ಥಿಕತೆಯನ್ನು ನಿರ್ಮಿಸುವುದು ಅತ್ಯಗತ್ಯ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ಪ್ರತಿಪಾದಿಸಿದ್ದಾರೆ. ನವದೆಹಲಿಯಲ್ಲಿ ನಡೆದ ೧೦ನೇ ಸುಸ್ಥಿರ ವ್ಯಾಪಾರ ಭವಿಷ್ಯದ ಶೃಂಗಸಭೆ ಉದ್ದೇಶಿಸಿ ಮಾತನಾಡಿದ ಅವರು, ದೇಶವು ಹಸಿರು ಮೂಲಸೌಕರ್ಯದತ್ತ ಸಾಗುವ ಪ್ರಕ್ರಿಯೆಯು ಸುಗಮವಾಗಿರಬೇಕು ಮತ್ತು ಇಂಧನ ಆಧಾರಿತ ನಾವೀನ್ಯತೆಗಳಿಂದ ಪ್ರೇರಿತವಾಗಿರಬೇಕು ಎಂದರು. ಸ್ವಚ್ಛ ಇಂಧನ, ಸುಸ್ಥಿರ ನಗರ ಯೋಜನೆ ಮತ್ತು ಸ್ಮಾರ್ಟ್ ಸಂಪನ್ಮೂಲ ನಿರ್ವಹಣೆಯಲ್ಲಿನ ಉದಯೋನ್ಮುಖ ತಂತ್ರಜ್ಞಾನಗಳು ಇಂಗಾಲದ ಹೊರಸೂಸುವಿಕೆಯನ್ನು ಕಡಿಮೆ ಮಾಡುವ ಮೂಲಕ ರಾಷ್ಟ್ರದ ಮೂಲಸೌಕರ್ಯವನ್ನು ಪರಿವರ್ತಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿವೆ ಎಂದು ಡಾ. ಜಿತೇಂದ್ರ ಸಿಂಗ್ ಹೇಳಿದ್ದಾರೆ.

<>><><*><><<>

ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಕಾರ್ಯದರ್ಶಿ ಸಿ.ಬಿ.ಜಾರ್ಜ್ ಅವರು ನವದೆಹಲಿಯಲ್ಲಿ ರಷ್ಯಾದ ಉಪ ವಿದೇಶಾಂಗ ಸಚಿವ ಅಲೆಕ್ಸಾಂಡರ್ ಅಲಿಮೋವ್ ಅವರೊಂದಿಗೆ ೭ನೇ ಭಾರತ-ರಷ್ಯಾ ವಿಶ್ವಸಂಸ್ಥೆ ಸಮಾಲೋಚನೆಗಳ ಸಹ-ಅಧ್ಯಕ್ಷತೆ ವಹಿಸಿದ್ದರು. ಎರಡೂ ಕಡೆಯವರು ವಿಶ್ವಸಂಸ್ಥೆಯಲ್ಲಿನ ತಮ್ಮ ಆದ್ಯತೆಗಳ ಬಗ್ಗೆ ಪರಸ್ಪರ ಮಾಹಿತಿ ಹಂಚಿಕೊಂಡಿದ್ದಾರೆ. ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ  ಕಾರ್ಯಸೂಚಿಗೆ ಸಂಬಂಧಿಸಿದ ವಿಷಯಗಳ ಮೇಲೆ, ಅದರಲ್ಲೂ ವಿಶೇಷವಾಗಿ ಭಯೋತ್ಪಾದನಾ ನಿಗ್ರಹ, ಶಾಂತಿಪಾಲನೆ ಮತ್ತು ವಿಶ್ವಸಂಸ್ಥೆ ಭದ್ರತಾ ಮಂಡಳಿಯ ಸುಧಾರಣೆಗಳ ಬಗ್ಗೆ ಚರ್ಚೆಗಳು ಕೇಂದ್ರೀಕೃತವಾಗಿತ್ತು. ಇದರೊಂದಿಗೆ, ಉಭಯ ದೇಶಗಳು ಪ್ರಸ್ತುತ ಪ್ರಾದೇಶಿಕ ಮತ್ತು ಜಾಗತಿಕ ಬೆಳವಣಿಗೆಗಳ ಬಗ್ಗೆಯೂ ವಿಚಾರ ವಿನಿಮಯ ಮಾಡಿಕೊಂಡಿವೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ.

<>><><*><><<>

ಫ್ರಾನ್ಸ್‌ನ ಪಲೈಸ್ ಡೆಸ್ ಸ್ಪೋರ್ಟ್ಸ್‌ನಲ್ಲಿ ನಿನ್ನೆ ನಡೆದ ಓರ್ಲಿಯನ್ಸ್ ಮಾಸ್ಟರ್ಸ್ ೨೦೧೯ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಭಾರತದ ಆಕರ್ಷಿ ಕಶ್ಯಪ್ ತನ್ನ ಎರಡೂ ಅರ್ಹತಾ ಪಂದ್ಯಗಳನ್ನು ಗೆದ್ದು, ಮಹಿಳಾ ಸಿಂಗಲ್ಸ್‌ನ ಮುಖ್ಯ ಪಂದ್ಯಗಳಿಗೆ ಅರ್ಹತೆ ಪಡೆದಿದ್ದಾರೆ. ಆಕರ್ಷಿ

ಕಶ್ಯಪ್, ಮಹಿಳಾ ಸಿಂಗಲ್ಸ್ ಅರ್ಹತಾ ಪಂದ್ಯದಲ್ಲಿ ತಮ್ಮ ದೇಶದವರೇ ಆದ ಶ್ರೀಯಾನ್ಶಿ ವಲಿಶೆಟ್ಟಿ ವಿರುದ್ಧ ೨೧-೧೯, ೧೭-೨೧, ೨೧-೧೩ ಅಂತರದಲ್ಲಿ ಗೆದ್ದರು. ಆಕರ್ಷಿ ಕಶ್ಯಪ್ ಮೊದಲ ಪಂದ್ಯದಲ್ಲಿ ಕಾಮನ್‌ವೆಲ್ತ್ ಕ್ರೀಡಾಕೂಟದ ಕಂಚಿನ ಪದಕ ವಿಜೇತೆ ಸಿಂಗಾಪುರದ ಯೆಯೊ ಜಿಯಾ ಮಿನ್ ಅವರನ್ನು ಎದುರಿಸಲಿದ್ದಾರೆ. ಪುರುಷರ ಡಬಲ್ಸ್‌ನ ಮೊದಲ ಸುತ್ತಿನಲ್ಲಿ, ಚೈನೀಸ್ ತೈಪೆಯ ಲೈ ಪೊ-ಯು ಮತ್ತು ತ್ಸೈ ಫು-ಚೆಂಗ್ ಜೋಡಿ, ಅರ್ಜುನ್ ರೆಡ್ಡಿ ಪೋಚನಾ ಮತ್ತು ಅಚ್ಯುತಾದಿತ್ಯ ರಾವ್ ದೊಡ್ಡವರಪು ಅವರನ್ನು ೨೧-೭, ೨೧-೯ ಅಂತರದಲ್ಲಿ ಸೋಲಿಸಿದರು. ವಿಶ್ವದ ಮಾಜಿ ನಂ.೧ ಆಟಗಾರ ಕಿದಂಬಿ ಶ್ರೀಕಾಂತ್, ಯುವ ಆಟಗಾರ್ತಿ ಆಯುಷ್ ಶೆಟ್ಟಿ, ಮಾಳವಿಕಾ ಬನ್ಸೋದ್, ಅನ್ಮೋಲ್ ಖಾರ್ಬ್ ಮತ್ತು ತನ್ವಿ ಶರ್ಮಾ ಇಂದು ಬಿಡಬ್ಲ್ಯೂಎಫ್ ಸೂಪರ್ ೩೦೦ ಪಂದ್ಯಾವಳಿಯಲ್ಲಿ ತಮ್ಮ ಅಭಿಯಾನವನ್ನು ಪ್ರಾರಂಭಿಸಲಿದ್ದಾರೆ. ಭಾರತದ ಅಗ್ರ ಡಬಲ್ಸ್ ಜೋಡಿ ಸಾತ್ವಿಕ್‌ಸಾಯಿರಾಜ್ ರಾಂಕಿರೆಡ್ಡಿ-ಚಿರಾಗ್ ಶೆಟ್ಟಿ, ಎರಡು ಬಾರಿ ಒಲಿಂಪಿಕ್ ಪದಕ ವಿಜೇತ ಪಿ.ವಿ.ಸಿಂಧು ಮತ್ತು ಲಕ್ಷ್ಯ ಸೇನ್ ಓರ್ಲಿಯನ್ಸ್ ಮಾಸ್ಟರ್ಸ್‌ನಿಂದ ಹೊರಗುಳಿಯಲಿದ್ದಾರೆ.

<>><><*><><<>

ಬೆಲ್ಜಿಯಂ ಮತ್ತು ನೆದರ್ಲ್ಯಾಂಡ್ಸ್ ಜಂಟಿಯಾಗಿ ಆಮ್ಸ್ಟರ್‌ಡ್ಯಾಮ್‌ನಲ್ಲಿ ನಡೆಯಲಿರುವ ಪುರುಷರ ಎಫ್‌ಐಎಚ್ ಹಾಕಿ ವಿಶ್ವಕಪ್ ೨೦೨೬ ಪಂದ್ಯಗಳಿಗಾಗಿ ತಂಡಗಳ ವಿಭಾಗಗಳ ಪಟ್ಟಿ ಬಿಡುಗಡೆ ಮಾಡಿದೆ. ಇದೇ ಆಗಸ್ಟ್ ೧೪ ರಿಂದ ೩೦ ರವರೆಗೆ ಆಮ್ಸ್ಟರ್‌ಡ್ಯಾಮ್ ಮತ್ತು ವಾವ್ರೆ ನಲ್ಲಿ ಪಂದ್ಯಗಳು ನಡೆಯಲಿವೆ. ಸಾಂಪ್ರದಾಯಿಕ ಪ್ರತಿಸ್ಪರ್ಧಿಗಳಾದ ಭಾರತ ಮತ್ತು ಪಾಕಿಸ್ತಾನವನ್ನು ಪುರುಷರ ಎಫ್‌ಐಎಚ್ ಹಾಕಿ ವಿಶ್ವಕಪ್ ೨೦೨೬ ಗಾಗಿ 'ಡಿ' ಗುಂಪಿನಲ್ಲಿ ಆಡಲಿವೆ. ಇಂಗ್ಲೆಂಡ್ ಮತ್ತು ವೇಲ್ಸ್ 'ಡಿ' ಗುಂಪಿನಲ್ಲಿರುವ ಇತರ ತಂಡಗಳಾಗಿವೆ. ತಂಡಗಳನ್ನು ತಲಾ ನಾಲ್ಕು ಗುಂಪುಗಳಾಗಿ ವಿಂಗಡಿಸಲಾಗಿದೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>